# ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೆಂಟ್/ಉಪಲೋಕ್/ಬಿಡಿ/1349/2021 ಬಹುಮಹಡಿಗಳಕಟ್ಟಡ,
ಮಂಡನಾಧಿಕಾರಿಗಳ ಶಾಖೆ, ಪಿ.ಓ. ಎ.ಆರ್.ಇ.17 ಡಾ: ಅಂಬೇಡ್ಕರ್ ವೀದಿ,ಬೆಂಗಳೂರು,
ದಿನಾಂಕ: 03/12/2021

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ

*****

ವಿಷಯ: ಸರ್ಕಾರಿ ನೌಕರರಾದ ಶ್ರೀ ಚಂದ್ರಶೇಖರ ತಂದೆ ನಂಜಪ್ಪ ಗ್ರಾಮ ಲೆಕ್ಕಾಧಿಕಾರಿ, ಜನಕಲೋಟಿ ವೃತ್ತ, ಐ.ಡಿ. ಹಳ್ಳಿ ಹೋಬಳಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ ರವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

1) ಪೋಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಕೇಂದ್ರ ವಲಯ, ಬೆಂಗಳೂರು ಇವರು ತುಮಕೂರು ಜಿಲ್ಲೆಯ ಭ್ರಷ್ಟಾಚಾರ ನಿಗ್ರಹ ದಳ ಪೋಲೀಸ್ ಠಾಣೆಯ ಪೋಲೀಸ್ ನಿರೀಕ್ಷಕರು (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ.) ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ ವರದಿಯಲ್ಲಿ ಶ್ರೀ ಚಂದ್ರಶೇಖರ ತಂದೆ ನಂಜಪ್ಪ ಗ್ರಾಮ ಲೆಕ್ಕಾಧಿಕಾರಿ, ಜನಕಲೋಟಿ ವೃತ್ತ, ಐ.ಡಿ. ಹಳ್ಳಿ ಹೋಬಳಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ.) ದೂರುದಾರರಾದ ಶ್ರೀ ವಿ. ರಾಮಚಂದ್ರ ರೆಡ್ಡಿ ತಂದೆ ವೆಂಕಟರಾಮು ರೆಡ್ಡಿ, ವಾಸ: ಚಿಕ್ಕ ಮಾಲೂರು ಗ್ರಾಮ, ಕೊಡಿಗೇನ ಹಳ್ಳಿ ಹೋಬಳಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಎದುರುದಾರರನ್ನು ಭೇಟಿ ಮಾಡಿದಾಗ ಎದುರುದಾರರು ಲಂಚದ ಹಣಕ್ಕೆ ಬೇಡಿಕೆ ಇಟ್ಟು ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

2) **ದೂರಿನ ಸಂಕ್ಷಿಪ್ತ ವಿವರಣೆ:-** ದೂರುದಾರರ ನಾದಿನಿಯಾದ ಶ್ರೀಮತಿ ಕೆ. ಪ್ರಭಾವತಿ ಕೋಂ ವಿ. ಮಂಜುನಾಥ ರೆಡ್ಡಿರವರ ಹೆಸರಿಗೆ ಯರ್ರಗುಂಟೆ ಗ್ರಾಮದ ಸರ್ವೆ ನಂ. 105 ರ ಜಮೀನಿನ ಖಾತೆ ಬದಲಾವಣೆ ಮಾಡಿಸುವ ಕೆಲಸಕ್ಕೆ ಎದುರುದಾರರು 25,000/- ರೂ. ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದು ಅದಕ್ಕೆ ದೂರುದಾರರು ಅಷ್ಟೊಂದು ಹಣ ಕೊಡಲು ಆಗುವುದಿಲ್ಲವೆಂದು ಹೇಳಿದ್ದಕ್ಕೆ ಕೊನೆಗೆ

15,000/- ರೂ. ಲಂಚದ ಹಣಕ್ಕೆ ತೀರ್ಮಾನವಾಗಿ, ದೂರುದಾರರ ಮಹೇಂದ್ರ ಬ್ಯಾಂಕ್ ಖಾತೆಯಿಂದ ಎ. ಟಿ. ಎಂ ಮುಖಾಂತರ 10,000/- ರೂ. ಲಂಚದ ಹಣವನ್ನು ನೀಡಿರುತ್ತಾರೆ. ನಂತರ ದಿನಾಂಕ 04/07/2018 ರಂದು ಮೊಬೈಲ್ ಮುಖಾಂತರ ಎದುರುದಾರರನ್ನು ಸಂಪರ್ಕಿಸಿ ಲಂಚದ ಹಣದಲ್ಲಿ ಕಡಿಮೆ ಮಾಡಲು ಕೇಳಿಕೊಂಡಾಗ ರೂ. 500/- ಕಡಿಮೆ ಮಾಡಿಕೊಂಡು ಉಳಿದ 4,500/- ರೂ. ಲಂಚದ ಹಣಕ್ಕೆ ಬೇಡಿಕೆ ಇಟ್ಟು ಒತ್ತಾಯಿಸಿದ್ದರಿಂದ ಸದರಿ ಸಂಭಾಷಣೆಯನ್ನು ದೂರುದಾರರು ತಮ್ಮ ಮೊಬೈಲ್‌ನಲ್ಲಿ ಧ್ವನಿ ಮುದ್ರಣ ಮಾಡಿಕೊಂಡಿದ್ದು ಇರುತ್ತದೆ. ಸದರಿ ಲಂಚದ ಹಣ ಎದುರುದಾರರಿಗೆ ನೀಡಲು ಇಷ್ಟವಿಲ್ಲದ ಕಾರಣ ದೂರುದಾರರು ತುಮಕೂರು ಜಿಲ್ಲೆ ಎ.ಸಿ.ಬಿ. ಪೊಲೀಸ್ ಠಾಣೆಗೆ ರೆಕಾರ್ಡ್ ಮಾಡಿದ ಸಂಭಾಷಣೆಯೊಂದಿಗೆ ದೂರನ್ನು ದಿನಾಂಕ: 04/07/2018 ರಂದು ನೀಡಿರುತ್ತಾರೆ. ಈ ಬಗ್ಗೆ ತುಮಕೂರು ಎ.ಸಿ.ಬಿ. ಠಾಣೆಯ ಅಧಿಕಾರಿಗಳು ದೂರನ್ನು ಪಡೆದು ತಮ್ಮ ಠಾಣೆಯ ಗುನ್ನೆ ನಂ. 05/2018 ರಲ್ಲಿ ಪ್ರಕರಣ ನೋಂದಾಯಿಸಿಕೊಂಡಿರುತ್ತಾರೆ.

3) ತನಿಖಾಧಿಕಾರಿಗಳು ದಿನಾಂಕ 04/07/2018 ರಂದು ನೆರಳು ಸಾಕ್ಷಿ ಹಾಗೂ ಸಹ ಪಂಚರನ್ನು ಬರ ಮಾಡಿಕೊಂಡು ದೂರುದಾರರನ್ನು ಪರಿಚಯಿಸಿ ಅವರಿಂದ ದೂರಿನ ವಿಷಯವನ್ನು ತಿಳಿದ ನಂತರ ಮೊಬೈಲಿನ ಮೆಮೋರಿ ಕಾರ್ಡಿನಲ್ಲಿ ರೆಕಾರ್ಡ್ ಮಾಡಿದ ಸಂಭಾಷಣೆಯನ್ನು ಡಿ.ವಿ.ಡಿ.ಗೆ ವರ್ಗಾಯಿಸಿಕೊಂಡು ಸದರಿ ಡಿ.ವಿ.ಡಿ.ಯನ್ನು ಆನ್ ಮಾಡಿ ಪಂಚರಿಗೆ ಕೇಳಿಸಿ, ಅಪಿಕರಣ ಮಾಡಿ ವಶಪಡಿಸಿಕೊಂಡಿರುತ್ತಾರೆ. ನಂತರ ಲಂಚದ ಹಣ ರೂ. 4,500/- ದೂರುದಾರರು ಹಾಜರುಪಡಿಸಿದ್ದು ಅವುಗಳ ಮುಖಬೆಲೆ ಮತ್ತು ನೋಟಿನ ಸಂಖ್ಯೆ ಪ್ರತ್ಯೇಕ ಹಾಳೆಯಲ್ಲಿ ನಮೂದಿಸಿ ಪಂಚರ ಮತ್ತು ತನಿಖಾಧಿಕಾರಿಗಳ ಸಹಿ ಪಡೆಯಲಾಯಿತು. ಸದರಿ ಹಣಕ್ಕೆ ಫಿನಾಪ್ತಲಿನ್ ಪೌಡರ್ ಲೇಪಿಸಿ ಸೋಡಿಯಂ ಕಾರ್ಬೋನೇಟ್ ದ್ರಾವಣ ತಯಾರಿಸಿ ಸದರಿ ದ್ರಾವಣದಲ್ಲಿ ನೋಟುಗಳಿಗೆ ಫಿನಾಪ್ತಲಿನ್ ಪೌಡರ್ ಲೇಪಿಸಿದ ಪಂಚನ ಕೈ ಬೆರಳುಗಳನ್ನು ದ್ರಾವಣದಲ್ಲಿ ಅದ್ದಿ ತೆಗೆದಾಗ ಅದು ತಿಳಿ ಗುಲಾಬಿ ಬಣ್ಣಕ್ಕೆ ಬಂದಿರುತ್ತದೆ. ಈ ಬಗ್ಗೆ ಮಾದರಿ ದ್ರಾವಣ ಹಾಗೂ ಗುಲಾಬಿ ಬಣ್ಣಕ್ಕೆ ತಿರುಗಿದ ದ್ರಾವಣವನ್ನು ಪ್ರತ್ಯೇಕವಾಗಿ ವಶಪಡಿಸಿಕೊಂಡು ಹಂತ ಹಂತವಾಗಿ ಫೋಟೋಗಳನ್ನು ತೆಗೆಸಿ ಪ್ರಕರಣದ ಮಾಹಿತಿ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ತನಿಖಾಧಿಕಾರಿಯವರು ಸೂಚಿಸಿರುತ್ತಾರೆ. ಶ್ರೀ ಹೆಚ್ ನಾಗಪ್ಪ ಬಿನ್ ಲೇಟ್ ಹನುಮಯ್ಯ, ಎಸ್. ಡಿ. ಎ. ಇವರನ್ನು ನೆರಳು ಸಾಕ್ಷಿಯಾಗಿ ನೇಮಿಸಿ ದೂರುದಾರರೊಂದಿಗೆ ಎದುರುದಾರರ ಬಳಿಹೋಗಿ ಅವರಿಗೆ ಅನುಮಾನ ಬಾರದಂತೆ ಮತ್ತು ಎದುರುದಾರರು ಹಾಗೂ ದೂರುದಾರರ ನಡುವೆ ನಡೆದ ಸಂಭಾಷಣೆಯನ್ನು ಕೇಳಿಸಿಕೊಂಡು ಘಟನೆಯನ್ನು ವೀಕ್ಷಿಸಿ,

ಎದುರುದಾರರು ಹಣವನ್ನು ಕೇಳಿ ಪಡೆದುಕೊಂಡರೆ, ಹಣವನ್ನು ಹೇಗೆ ಪಡೆದುಕೊಳ್ಳುತ್ತಾರೆ, ಹಣವನ್ನು ಎಲ್ಲಿ ಇಟ್ಟುಕೊಳ್ಳುತ್ತಾರೆ ಎಂಬುದನ್ನು ಗಮನಿಸಿ ನಂತರ ತಿಳಿಸಬೇಕೆಂದು ತನಿಖಾಧಿಕಾರಿಗಳು ತಿಳಿಸಿರುತ್ತಾರೆ. ತನಿಖಾಧಿಕಾರಿಗಳು ನೀಡಿದ ವಾಯ್ಸ್ ರೆಕಾರ್ಡರ್‌ನಲ್ಲಿ ಧ್ವನಿ ಸಂಭಾಷಣೆಯನ್ನು ರೆಕಾರ್ಡ್ ಮಾಡಲು ದೂರುದಾರರಿಗೆ ತಿಳಿಸಿರುತ್ತಾರೆ. ದೂರುದಾರರಿಗೆ ಎದುರುದಾರರು ಲಂಚದ ಹಣ ಬೇಡಿಕೆ ಇಟ್ಟು ಸ್ವೀಕರಿಸಿದ ನಂತರ ತನ್ನ ಕೈಗಳಿಂದ ತಲೆಯನ್ನು ವರೆಸಿಕೊಳ್ಳುವುದರ ಮೂಲಕ ಸಂಜ್ಞೆ ನೀಡಬೇಕೆಂದು ಸೂಚಿಸಿರುತ್ತಾರೆ. ಈ ಬಗ್ಗೆ ಸವಿಸ್ತಾರ ಪ್ರಾಯೋಗಿಕ ಪಂಚನಾಮೆಯನ್ನು ನಿರ್ವಹಿಸಿರುತ್ತಾರೆ.

4) ದೂರುದಾರರು ಪಂಚ ಸಾಕ್ಷಿಗಳು, ಸಿಬ್ಬಂಧಿಯವರೊಂದಿಗೆ ತನಿಖಾಧಿಕಾರಿಗಳು ದಿನಾಂಕ 04/07/2018 ರಂದು ಮಧುಗಿರಿ ಪಟ್ಟಣದಲ್ಲಿರುವ ಕೆ. ಆರ್. ಬಡಾವಣೆಯ 2ನೇ ಕ್ರಾಸ್‌ನಲ್ಲಿರುವ ಶ್ರೀ ರಾಜೇಶ್ವರಿ ಕೋಂ ನಾರಾಯಣಾಚಾರ್‌ರವರ ಒಂದನೇ ಮಹಡಿಯಲ್ಲಿರುವ ಎದುರುದಾರರ ಮನೆಯಲ್ಲಿ ದೂರುದಾರರು ಮತ್ತು ನೆರಳು ಸಾಕ್ಷಿ ಹೆಚ್. ನಾಗಪ್ಪ ಇವರ ಜೊತೆ ಎದುರುದಾರರಿಂದ ರೂ. 4,500/- ಲಂಚದ ಹಣವನ್ನು ನೀಡಿದಾಗ ಎದುರುದಾರರು ತನ್ನ ಬಲಗೈಯಿಂದ ಪಡೆದು ಎರಡೂ ಕೈಗಳಿಂದ ಎಣಿಸಿಕೊಂಡು ಅವರು ಧರಿಸಿದ್ದ ಶರ್ಟಿನ ಎಡಭಾಗದ ಜೇಬಿಗೆ ಹಾಕಿಕೊಂಡಿರುತ್ತಾರೆ. ನಂತರ ದೂರುದಾರರು ಕೊಠಡಿಯಿಂದ ಹೊರಗೆ ಬಂದು ತನ್ನ ತಲೆಯನ್ನು ಹಿಂದಕ್ಕೆ ಒರೆಸಿಕೊಳ್ಳುವುದರ ಮೂಲಕ ನಿಗದಿತ ಸೂಚನೆಯನ್ನು ತನಿಖಾಧಿಕಾರಿಯವರಿಗೆ ನೀಡಿರುತ್ತಾರೆ. ತನಿಖಾಧಿಕಾರಿಯವರು ಪಂಚರ ಸಮಕ್ಷಮ ಎದುರುದಾರರು ತಾನು ಧರಿಸಿದ್ದ ಶರ್ಟಿನ ಎಡಭಾಗದ ಜೇಬಿನಲ್ಲಿದ್ದ ಪಿನಾಪ್ತಲಿನ್ ಪೌಡರ್ ಲೇಪಿತ ಹಣ ರೂ. 4,500/- ನ್ನು ಹಾಜರುಪಡಿಸಿದ್ದು ಸದರಿ ನೋಟುಗಳ ಮೌಲ್ಯ ನೋಟುಗಳ ನಂಬರ್ ಪ್ರಾಯೋಗಿಕ ಪಂಚನಾಮೆಯಲ್ಲಿ ಬರೆದಂತಹ ನೋಟುಗಳ ನಂಬರಿಗೂ ಮೌಲ್ಯಕ್ಕೂ ತಾಳೆಯಾಗಿದ್ದು ಇರುತ್ತದೆ. ಸದರಿ ಲಂಚದ ಹಣವಾದ 4,500/- ರೂ.ಗಳನ್ನು ಎದುರುದಾರರಿಂದ ಅಮಾನತ್ತು ಪಡಿಸಿಕೊಂಡಿರುತ್ತಾರೆ. ತನಿಖಾಧಿಕಾರಿಯವರು ಎದುರುದಾರರ ಬಲಗೈ ಬೆರಳುಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ಅದೇ ರೀತಿ ಎದುರುದಾರರ ಎಡಗೈ ಬೆರಳುಗಳನ್ನು ಇನ್ನೊಂದು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ಎದುರುದಾರರಿಗೆ ಬೇರೆ ಶರ್ಟಿನ ವ್ಯವಸ್ಥೆ ಮಾಡಿ ಆತನು ಧರಿಸಿದ್ದ ಶರ್ಟನ್ನು ಬಿಚ್ಚಿಸಿ ಸದರಿ ಶರ್ಟಿನ ಎಡಭಾಗದ ಜೇಬನ್ನು ಹೊರಭಾಗಕ್ಕೆ ತೆಗೆದು ಅದನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ

ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ಸದರಿ ಶರ್ಟನ್ನೂ ಸಹ ತನಿಖಾಧಿಕಾರಿಯವರು ಪಂಚರ ಸಮಕ್ಷಮ ಅಮಾನತ್ ಪಡಿಸಿಕೊಂಡಿರುತ್ತಾರೆ. ದೂರುದಾರರು ಪಂಚ ಸಾಕ್ಷಿಗಳು, ಸಿಬ್ಬಂಧಿಯವರೊಂದಿಗೆ ತನಿಖಾಧಿಕಾರಿಗಳು ನೆರಳು ಸಾಕ್ಷಿ ಶ್ರೀ ಹೆಚ್. ನಾಗಪ್ಪ, ಸಹ ಪಂಚ ಅವರಿಂದ ಅಲ್ಲಿಯ ನಡುವಳಿಕೆಗಳನ್ನು ತಿಳಿದು ಸವಿಸ್ತಾರ ಜಪ್ತಿ ಪಂಚನಾಮೆ ನಿರ್ವಹಿಸಿ, ದೂರುದಾರರ ಹಾಗೂ ಪಂಚರ ಸಮಕ್ಷಮ ಸದರಿ ಹಣ, ಮುದ್ದೆ ಮಾಲುಗಳನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ತನಿಖಾಧಿಕಾರಿಗಳು ವಶಪಡಿಸಿ ಕೊಂಡಿರುತ್ತಾರೆ. ಶ್ರೀ ನಾರಾಯಣಪ್ಪ ಬಿನ್ ಲೇಟ್ ಹನುಮಂತರಾಯಪ್ಪ, ಕಂದಾಯ ನಿರೀಕ್ಷಕರು, ಐ.ಡಿ. ಹಳ್ಳಿ ರವರಿಗೆ ಎದುರುದಾರರು ಲಂಚದ ಹಣಕ್ಕೆ ಬೇಡಿಕೆ ಇಟ್ಟ ಸಂಭಾಷಣೆಯ ಧ್ವನಿ ಮುದ್ರಣವನ್ನು ವಾಯ್ಸ್ ರೆಕಾರ್ಡರ್‌ನಿಂದ ಡಿ.ವಿ.ಡಿಯನ್ನು ಲ್ಯಾಪ್ ಟ್ಯಾಪ್‌ನಲ್ಲಿ ಹಾಕಿ ಆನ್ ಮಾಡಿ ಕೇಳಿಸಲಾಗಿ ಅದರಲ್ಲಿ ಮುದ್ರಿತವಾಗಿರುವ ಸಂಭಾಷಣೆಯಲ್ಲಿನ ಒಂದು ಧ್ವನಿ ಎದುರುದಾರರವರದ್ದೇ ಎಂದು ಗುರ್ತಿಸಿರುತ್ತಾರೆ. ತನಿಖಾಧಿಕಾರಿಯವರು ಸವಿಸ್ತಾರ ಜಪ್ತಿ ಪಂಚನಾಮೆ ಪೂರೈಸಿದ ನಂತರ ಎದುರುದಾರರನ್ನು ದಸ್ತಗಿರಿ ಮಾಡಿರುತ್ತಾರೆ. ಅಮಾನತ್ತು ಪಂಚನಾಮೆ ಕಾಲದಲ್ಲಿ ಎದುರುದಾರರ ಹೆಸರನ್ನು ದೂರುದಾರರು ದೂರಿನಲ್ಲಿ ಉಲ್ಲೇಖಿಸುವಾಗ ರವಿಕುಮಾರ್ ಗರಣಿ ಸರ್ಕಲ್ ಎಂದು ಉಲ್ಲೇಖಿಸಿದ್ದು ಆದರೆ ಸದರಿಯವರ ಹೆಸರು ಚಂದ್ರಶೇಖರ್ ಎಂಬುದು ಸ್ಪಷ್ಟವಾಗಿ ತಿಳಿದು ಬಂದಿರುತ್ತದೆ. ದೂರುದಾರರು ಜಪ್ತಿ ಪಂಚನಾಮೆ ಕಾಲದಲ್ಲಿ ವಾಯ್ಸ್ ರೆಕಾರ್ಡರನ್ನು ಆನ್ ಮಾಡಿಕೊಳ್ಳುವುದನ್ನು ಮರೆತಿರುವುದಾಗಿ ತಿಳಿಸಿರುತ್ತಾರೆ. ಸದರಿ ಹಣದ ಬಗ್ಗೆ ತನಿಖಾಧಿಕಾರಿಯು ಎದುರುದಾರರಿಗೆ ಸಮಜಾಯಿಷಿ ಕೇಳಲಾಗಿ ಅವರು ತಮ್ಮ ಸಮಜಾಯಿಷಿಯಲ್ಲಿ "ನಾನು ಯಲ್ಲೂರು ವೃತ್ತದ ಗ್ರಾಮ ಲೆಕ್ಕಿಗನಾಗಿ ಪ್ರಭಾರವನ್ನು ಒಂದು ತಿಂಗಳಿನಿಂದ ನಿರ್ವಹಿಸುತ್ತಿದ್ದು, ನಾನು ಪ್ರಭಾವತಿ ಎಂಬವರ ಖಾತೆಯನ್ನು ಈಗಾಗಲೇ ಮಾಡಿಕೊಟ್ಟಿದ್ದು, ವಿ. ರಾಮಚಂದ್ರ ರೆಡ್ಡಿರವರು ನನಗೆ ನೀಡಿದ ಹಣ ಸಾಲದ ರೂಪವಾಗಿರುತ್ತದೆ. ನಾನು ಮಧುಗಿರಿ ಖಾತೆದಾರರಿಗೆ ಮೇಲ್ಕಂಡ ವಿ. ರಾಮಚಂದ್ರ ರೆಡ್ಡಿರವರು ಯಾವುದೇ ಖಾತೆಯ ಬದಲಾವಣೆಗೆ ಅಣ (ಹಣ) ನೀಡಿರುವುದಿಲ್ಲ ತಮ್ಮ ಅವಗಾಹನೆಗೆ ನನ್ನ ಮನವಿಯನ್ನು ಸಲ್ಲಿಸಿದ್ದೇನೆ" ಎಂದು ಲಿಖಿತ ಸಮಜಾಯಿಷಿ ನೀಡಿರುತ್ತಾರೆ. ಆದರೆ ಸದರಿ ಸಮಜಾಯಿಷಿ ಸಕಾರಾತ್ಮಕವಾಗಿರುವುದಿಲ್ಲ. ಸದರಿಯವರು ಲಂಚದ ಹಣಕ್ಕೆ ಬೇಡಿಕೆ ಇಟ್ಟ ಬಗ್ಗೆ ಮೊಬೈಲ್‌ನಲ್ಲಿ ಮಾತನಾಡಿದ ಸಂಭಾಷಣೆ, ಫಿನಾಪ್ತಲಿನ್ ಪೌಡರ್ ಲೇಪಿತ ಹಣವನ್ನು ಸ್ವೀಕರಿಸಿದ ಬಗ್ಗೆ ರಾಸಾಯನಿಕ ವಿಶ್ಲೇಷಣಾ ವರದಿಯಿಂದ ದೃಢಪಟ್ಟಿರುತ್ತದೆ.

5) ಧ್ವನಿ ವಿಶ್ಲೇಷಣಾ ವರದಿಯಲ್ಲಿ ನಿಮ್ಮ ಧ್ವನಿಯೊಂದಿಗೆ ತಾಳೆಯಾಗಿರುವುದು ಧೃಡಪಟ್ಟಿರುತ್ತದೆ ಹಾಗೂ ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೇ ಮಾಲುಗಳಲ್ಲಿ ಪಿನಾಪ್ತಲಿನ್ ಅಂಶ ಇರುವುದು ಧೃಡಪಟ್ಟಿರುತ್ತದೆ.

6) ಎದುರುದಾರರು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಸಮಜಾಯಿಷಿಯನ್ನು ದಿನಾಂಕ 20/09/2021 ರಂದು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಷಿಯನ್ನು ಪರಿಶೀಲಿಸಲಾಗಿ ಎದುರುದಾರರು "ಅರ್ಜಿದಾರರಿಂದ ನಾನು 25,000/- ರೂ. ಬೇಡಿಕೆ ಇಟ್ಟಿದ್ದಾರೆಂದು ದೂರಿದ್ದು ಇದರ ಬಗ್ಗೆ ನಾನು ಯಾವುದೇ ಬೇಡಿಕೆ ಇಟ್ಟಿರುವುದಿಲ್ಲ. ಇವರಿಂದ ನಾನು ಯಾವುದೇ ಹಣ ಪಡೆದಿರುವುದಿಲ್ಲ ಎಂದು ತಮ್ಮಲ್ಲಿ ಮನವಿ. ಮೊಬೈಲ್‌ನಲ್ಲಿ ದಾಖಲಾಗಿರುವ ಧ್ವನಿ ನನ್ನದಾಗಿರುವುದಿಲ್ಲ. ಯಾವುದೇ ಕರ್ತವ್ಯ ನಿಷ್ಠೆ ಪಾಲಿಸದೆ ಕರ್ತವ್ಯದ ಬಗ್ಗೆ ಶ್ರದ್ಧೆ ಸರ್ಕಾರಿ ನೌಕರನು ನಡೆದುಕೊಳ್ಳುವ ರೀತಿಯಲ್ಲಿಯೇ ಕರ್ತವ್ಯ ನಿರ್ವಹಿಸುತ್ತಿದ್ದೇನೆ" ಎಂದು ಆಪಾದನೆಗಳನ್ನು ನಿರಾಕರಿಸಿರುವುದರ ಹೊರತಾಗಿ ಆಪಾದನೆಗಳನ್ನು ಅಲ್ಲಗೆಳೆಯಲು ಯಾವುದೇ ಪೂರಕ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ ಅವರು ನೀಡಿರುವ ಸಮಜಾಯಿಷಿ ಅಂಶಗಳ ಮೇರೆಗೆ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ.

7) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ, ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ, ಧ್ವನಿ ವಿಶ್ಲೇಷಣಾ ವರದಿ, ರಾಸಾಯನಿಕ ತಜ್ಞರ ಪರೀಕ್ಷಾ ವರದಿ ಮತ್ತು ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೇ ಮಾಲುಗಳಲ್ಲಿ ಪಿನಾಪ್ತಲಿನ್ ಅಂಶ ಇವುಗಳನ್ನು ಪರಿಶೀಲಿಸಿದಾಗ ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಟತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

8) ಅದಲ್ಲದೆ ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) 2021 ನಿಯಮ 3 (1) (i ರಿಂದ iii) ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ

ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದೂ ಕೋರಿದೆ.

9) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

4/12/21

(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)
ಉಪಲೋಕಾಯುಕ್ತರು
ಕರ್ನಾಟಕ ರಾಜ್ಯ, ಬೆಂಗಳೂರು.